ಹೆಚ್ಚು ಮೌಲ್ಯವುಳ್ಳ ಬೆಳೆಗಳಾಗಿರುವುದರಿಂದ ವಿಮಾ ಕಂತಿನ ಮೊತ್ತವು ಅಧಿಕವಾಗಿರುವುದರಿಂದ ರೈತರಿಗೆ ಹೆಚ್ಚಿನ ಹೊರೆಯನ್ನು ತಪ್ಪಿಸಲು ರಾಜ್ಯಮಟ್ಟದ ಬೆಳೆವಿಮಾ ಸಮನ್ವಯ ಸಮಿತಿ ಸಭೆಯಲ್ಲಿ ನಿರ್ಣಯಿಸಿದಂತೆ, ಸದರಿ ಬೆಳೆಗಳನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗಿರುತ್ತದೆ.

ಆ) ಬೆಳೆ ಹಾನಿಗೆ ಸಂಬಂಧಿಸಿದಂತೆ, ಸರ್ಕಾರ ಕೈಗೊಂಡ ಕ್ರಮಗಳು

1. ಕೇಂದ್ರ ಸರ್ಕಾರದಿಂದ ಅಡಿಕೆ ಕೊಳೆ ರೋಗಕ್ಕೆ ಇನ್ ಪುಟ್ ಸಬ್ಸಿಡಿ ವಿತರಿಸಲು ₹ 26.00 ಕೋಟಿಗಳ ಪರಿಹಾರ ಧನವನ್ನು ರಾಜ್ಯ ವಿಪತ್ತು ಪರಿಹಾರ ನಿಧಿಯಡಿ ದಕ್ಷಿಣ ಕನ್ನಡ ಜಿಲ್ಲೆಗೆ ಬಿಡುಗಡೆ ಮಾಡಲಾಗಿದೆ.
2. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಾಳೆ ಬೆಳೆಯನ್ನು ಹವಮಾನಾಧರಿತ ಬೆಳೆ ವಿಮೆ ಯೋಜನೆಯಡಿ 9 ಹೋಬಳಿಗಳಲ್ಲಿ ಮುಂಗಾರು ಹಂಗಾಮಿಗೆ ಅಧಿಸೂಚಿಸಲಾಗಿರುತ್ತದೆ. ಪ್ರತಿ ಹೆಕ್ಟರಿನ ವಿಮಾ ಮೊತ್ತವು ₹ 1.00 ಲಕ್ಷ ರೂ.ಗಳಾಗಿದ್ದು, ಶೇ.12 ವಿಮಾ ಕಂತಿನ ದರವಾಗಿದ್ದು, ಅದರಲ್ಲಿ ಶೇ.6 ಅನ್ನು ರೈತರು ಪಾವತಿಸಬೇಕಾಗಿದ್ದು, ಉಳಿದ ಶೇ.6ರ ದರವನ್ನು ಸರ್ಕಾರದ ವತಿಯಿಂದ ಪಾವತಿಸಲಾಗುತ್ತಿದೆ.
3. 2013–14ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಾರಿ ಮಳೆಯಿಂದ ತೋಟಗಾರಿಕೆ ಬೆಳೆಗಳಿಗೆ ಆಗಿರುವ ನಷ್ಟವನ್ನು ಅಂದಾಜಿಸಿ, ಪರಿಹಾರವನ್ನು ಬಿಡುಗಡೆ ಮಾಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಈ ಬಗ್ಗೆ ರಾಜ್ಯ ವಿಪತ್ತು ಪರಿಹಾರ ನಿಧಿ ಅಡಿ ಅನುದಾನವನ್ನು ಕಂದಾಯ ಇಲಾಖೆ ಬಿಡುಗಡೆ ಮಾಡಲಾಗುತ್ತದೆ.

ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳು

296(162); ಶ್ರೀ ಮೋಹಿಯುದ್ದಿನ್ ಬಾವಾ ಬಿ.ಎ. (ಮಂಗಳೂರು ನಗರ ಉತ್ತರ)

ಅ) ಮಂಗಳೂರು ತಾಲ್ಲೂಕಿನಲ್ಲಿನ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ಹಾಗೂ ನಿಲಯಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

ಆ) ಸುರತ್ಕಲ್ ನಗರದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರಿ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಯೋಜನೆಯ ರೂಪರೇಷಗಳೇನು ಹಾಗೂ ಕೈಗೊಂಡ ಕ್ರಮವೇನು?

ಡಾ॥ ಖಮರುಲ್ ಇಸ್ಲಾಂ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ಯಮಿಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು.)

ಅ) ಅಲ್ಪಸಂಖ್ಯಾತರ ಇಲಾಖಾವತಿಯಿಂದ ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕಿನಲ್ಲಿ ಕೆಳಕಂಡ 3 ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.

1	ಮಂಗಳೂರು (ಗುರುಕುಂಬಳ)	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ	50 ಸಂಖ್ಯಾಬಲ
2	ಮಂಗಳೂರು	ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ	75 ಸಂಖ್ಯಾಬಲ
3	ಮಂಗಳೂರು	ಮಂಗಳೂರು ವಿಶ್ವವಿದ್ಯಾನಿಲಯ	75 ಸಂಖ್ಯಾಬಲ
		ಒಟ್ಟು	**200** ಸಂಖ್ಯಾಬಲ

ಆ) ಸರ್ಕಾರದ ಮುಂದೆ ಇಂತಹ ಯಾವುದೇ ಪ್ರಸ್ತಾಪವಿಲ್ಲ.

ಇ) ಅನ್ವಯಿಸುವುದಿಲ್ಲ.